ಜಿಲ್ಲಾ ಹಾಗೂ ದೊಡ್ಡ ಆಸ್ಪತ್ರೆಗಳಿಗೆ ಕೆ.ಎ.ಎಸ್. ಅಧಿಕಾರಿಗಳ ನೇಮಕ

4636 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಹಾಗೂ ದೊಡ್ಡ ಆಸ್ಪತ್ರೆಗಳಿಗೆ ಆಡಳಿತಾಧಿಕಾರಿಯನ್ನಾಗಿ ಕೆ.ಎ.ಎಸ್. ಅಧಿಕಾರಿಗಳನ್ನು ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಆ) ಈ ರೀತಿಯ ನೇಮಕಗಳಿಂದಾಗುವ ಸಾಧಕ ಭಾದಕಗಳೇನು?

ಇ) ಈ ರೀತಿಯ ನೇಮಕಕ್ಕೆ ವೈದ್ಯರು ವಿರೋಧ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರದ ನಿಲುವೇನು?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮತ್ತು ಆ) ಬೆಂಗಳೂರಿನ ಮುಖ್ಯ ಆಸ್ಪತ್ರೆಗಳಲ್ಲಿನ ಕಾರ್ಯನಿರ್ವಹಣೆಯನ್ನು ಉತ್ತಮಪಡಿಸುವ ಉದ್ದೇಶ ಪರಿಶೀಲನೆಯಲ್ಲಿದೆ. ಸದರಿ ಆಸ್ಪತ್ರೆಗಳ ಅಧೀಕ್ಷಕರ ಉಸ್ತುವಾರಿಯಡಿಯಲ್ಲಿ ಕೆಲವು ಕಾಲ ಆಡಳಿತಾತ್ಮಕ ವಿಷಯಗಳನ್ನು ನೋಡಿಕೊಳ್ಳಲು ಕೆ.ಎ.ಎಸ್. ಅಧಿಕಾರಿಗಳನ್ನು ನೇಮಿಸುವುದು ಒಂದು ಸಲಹೆಯಾಗಿದೆ. ಮುಂದೆ ಆಸ್ಪತ್ರೆಯ ಆಡಳಿತಾತ್ಮಕ ವಿಷಯಗಳಲ್ಲಿ ವೈದ್ಯರು ತರಬೇತಿ ಹೊಂದಿ ಸದರಿ ಹೊಸ ಕ್ಷೇತ್ರದಲ್ಲಿ ಪರಿಣತಿ ಹೊಂದಬಹುದಾಗಿದೆ. ಈ ವಿಷಯವು ಇನ್ನೂ ಪ್ರಾರಂಭಿಕ ಹಂತದ ಪರಿಶೀಲನೆಯಲ್ಲಿದೆ.

ಇ) ಈ ಪ್ರಸ್ತಾವನೆಗೆ ಸ್ವಲ್ಪ ವಿರೋಧವಿರುವುದು ಗಮನಕ್ಕೆ ಬಂದಿದೆ. ಆದಾಗ್ಯೂ, ಆಸ್ಪತ್ರೆಗಳ ಆಡಳಿತ ಹಾಗೂ ವ್ಯವಸ್ಥೆಯನ್ನು ಉತ್ತಮಗೊಳಿಸುವುದು ಸರ್ಕಾರದ ಉದ್ದೇಶವಾಗಿದೆ.

ರಾಜ್ಯದ ಸರ್ಕಾರಿ ಕಾಲೇಜುಗಳಿಗೆ ಯು.ಜಿ.ಸಿ. ಅನುದಾನ

4637 - ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ವಿಜ್ಞಾನ, ಕಲಾ ಮತ್ತು ವಾಣಿಜ್ಯ ಕಾಲೇಜುಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

ಆ) ಈ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ವಿಶ್ವವಿದ್ಯಾಲಯ ಅನುದಾನ ಆಯೋಗ ಧನ ಸಹಾಯ ನೀಡಿದೆಯೇ?

ಇ) ಹಾಗಿದ್ದಲ್ಲಿ ಯಾವ ಯಾವ ಕಾಲೇಜುಗಳಿಗೆ ಯು.ಜಿ.ಸಿ. ಧನ ಸಹಾಯವನ್ನು ನೀಡಿದೆ?

ಈ) ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಕಾಲೇಜುಗಳಿಗೆ ಯು.ಜಿ.ಸಿ. ಧನ ಸಹಾಯ ನೀಡಲು ಉತ್ಸುಕವಾಗಿರುವುದು ನಿಜವಲ್ಲವೇ?